1	2	3	4	5	6
			4	-do-	
			38	-do-	
			2		
			7		
			40		
12.	116/2 of Sutagatti	5	33	30'x40'	
			60	40'x60'	
			52	-do-	
			44	-do-	
			55	-do-	
13.	11/2B and 11/3B of	14	91 to 99	20'x30'	
			48	20'x30'	
			66	-do-	
			16	-do-	
			5	-do-	
			116	30'x40'	
	Total	**95**			

ಧಾರವಾಡ ಜಿಲ್ಲೆಯಲ್ಲಿನ ಬರಗಾಲ ಪೀಡಿತ ತಾಲ್ಲೂಕುಗಳು

1955 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಧಾರವಾಡ ಜಿಲ್ಲೆಯ ಎಷ್ಟು ತಾಲ್ಲೂಕುಗಳನ್ನು ಈ ವರ್ಷ ಬರಗಾಲ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ? (ಮಾಹಿತಿ ಒದಗಿಸುವುದು)*

ಆ) *ಬರಗಾಲ ಪರಿಹಾರ ಕಾಮಗಾರಿಗಳ ಸಲುವಾಗಿ ಪ್ರತಿಯೊಂದು ತಾಲ್ಲೂಕಿಗೆ ಎಷ್ಟು ಹಣ ಮಂಜೂರು ಮಾಡಲಾಗಿದೆ?*

ಇ) *ಹುಬ್ಬಳ್ಳಿ ತಾಲ್ಲೂಕಿನಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ? (ವಿವರಗಳನ್ನು ಒದಗಿಸುವುದು)*

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :

ಅ) ಯಾವುದೇ ತಾಲ್ಲೂಕನ್ನು ಬರಗಾಲ ಪೀಡಿತ ಎಂದು ಘೋಷಿಸಿರುವುದಿಲ್ಲ.

ಆ) 1997-98ರಲ್ಲಿ ಬರಗಾಲ ಪರಿಹಾರ ಉದ್ಯೋಗ ಸೃಜನೆ ಕಾಮಗಾರಿಗಳ ಸಲುವಾಗಿ ನವಲಗುಂದ ತಾಲ್ಲೂಕಿಗೆ ರೂ. 15.00 ಲಕ್ಷಗಳು ಹಾಗೂ ಧಾರವಾಡ ತಾಲ್ಲೂಕಿಗೆ ರೂ. 5.00 ಲಕ್ಷಗಳನ್ನು ಸರ್ಕಾರವು ಬಿಡುಗಡೆ ಮಾಡಿದೆ.

ಇ) ಹುಬ್ಬಳ್ಳಿ ತಾಲ್ಲೂಕಿನಲ್ಲಿ ಯಾವುದೇ ಬರ ಪರಿಹಾರ ಕಾಮಗಾರಿಗಳನ್ನು ಕೈಗೊಂಡಿಲ್ಲ.

ಹುಬ್ಬಳ್ಳಿ-ಧಾರವಾಡ ಮಹಾನಗರದಲ್ಲಿರುವ ಅನಧಿಕೃತ ಕಟ್ಟಡಗಳು

1956 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ - ಧಾರವಾಡ ಮಹಾನಗರದಲ್ಲಿ ಅನಧಿಕೃತ ವಸತಿ ವಿನ್ಯಾಸಗಳು ಮತ್ತು ಕಟ್ಟಡಗಳು ತಲೆ ಎತ್ತುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಅವುಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು) :

ಅ) ಹೌದು.

ಆ) ಹುಬ್ಬಳ್ಳಿ--ಧಾರವಾಡ ಅವಳಿ ನಗರಗಳಲ್ಲಿ ಒಟ್ಟು 75 ವಿನ್ಯಾಸಗಳು ಅನಧಿಕೃತವಾಗಿ ನಿರ್ಮಾಣಗೊಂಡಿದ್ದು ಕರ್ನಾಟಕ ನಗರ ಪ್ರದೇಶಗಳಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ ಕಾಯ್ದೆ 1991ರನ್ವಯ ದಿನಾಂಕ 01-01-95ರ ಪೂರ್ವದಲ್ಲಿ ನಿರ್ಮಿಸಿದ ಅನಧಿಕೃತ ಕಟ್ಟಡಗಳನ್ನು ಸಕ್ರಮಗೊಳಿಸಲು ದಿನಾಂಕ: 31-12-95ಕ್ಕೂ ಮುಂಚೆ ಅರ್ಜಿ ಸಲ್ಲಿಸಿದ್ದರೆ ಅವುಗಳನ್ನು ಪರಿಗಣಿಸಲು ನಿಯಮಾವಳಿಗಳಲ್ಲಿ ಅವಕಾಶ ಇದೆ.

ಈ ನಿಯಮಗಳ ಪ್ರಕಾರ ಸದರೀ ಅರ್ಜಿಗಳ ವಿಲೇವಾರಿ ಕುರಿತು ಹಾಗೂ ಅನರ್ಹ ಕಟ್ಟಡಗಳನ್ನು ತೆಗೆದುಹಾಕುವ ಕುರಿತು ನೋಟೀಸ್‌ಗಳನ್ನು ಜಾರಿ ಮಾಡುವ ಕಾರ್ಯವು ಪ್ರಗತಿಯಲ್ಲಿದೆ.

ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರತಕ್ಕ ಹುದ್ದೆಗಳ ಭರ್ತಿ.

1957- ಹೆಚ್. ಕೆ. ಕುಮಾರಸ್ವಾಮಿ : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ ಎ,ಬಿ,ಸಿ, ಮತ್ತು ಡಿ ದರ್ಜೆಯ ನೌಕರರ ಸಂಖ್ಯೆ ಎಷ್ಟು?